ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಆನ್‌ಲೈನ್ ಮೂಲಕ ಸರಬರಾಜು ಮಾಡುವ ನಕಲಿ ವಸ್ತುಗಳ ಬಗ್ಗೆ

ಶ್ರೀ ಐವನ್ ಡಿ' ಸೋಜಾ(ನಾಮನಿರ್ದೇಶನ ಹೊಂದಿದವರು):-

1050 (1285) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆನ್‌ಲೈನ್ ಮೂಲಕ ಸರಬರಾಜು ಮಾಡುವ ಗ್ರಾಹಕರ ವಸ್ತುಗಳಲ್ಲಿ ನಕಲಿ ವಸ್ತುಗಳನ್ನು ನೀಡಿರುವ ಬಗ್ಗೆ ಸರ್ಕಾರಕ್ಕೆ ದೂರುಗಳು ಬಂದಿವೆಯೇ ; ಈ ಬಗ್ಗೆ ಸರ್ಕಾರದ ಕ್ರಮವೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಗ್ರಾಹಕರ ರಕ್ಷಣೆಗಾಗಿ ಗ್ರಾಹಕರ ಹಕ್ಕುಗಳ ಬಗ್ಗೆ ಮಾಹಿತಿ ನೀಡುವ ಫಲಕಗಳನ್ನು "ಮೋಲ್" ಗಳಲ್ಲಿ ಪ್ರಕಟಿಸಬೇಕೆಂದು ನಿಯಮವಿದ್ದರೂ ಅದನ್ನು ಮಾಡದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಎಷ್ಟು ಪ್ರಕರಣಗಳು ದಾಖಲಾಗಿವೆ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಗ್ರಾಹಕರ ರಕ್ಷಣೆ ಹಿತದೃಷ್ಟಿಯಿಂದ ಎಷ್ಟು ನಾಮಫಲಕಗಳನ್ನು ಅಳವಡಿಸಲಾಗಿದೆ ? (ವಿವರ ನೀಡುವುದು)